**JANUARY 23,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ವಿವೇಕಾದಿತ್ಯ ಕನಿಯಾಲ**

<><><>

**ಕರ್ನಾಟಕ ರಾಜ್ಯ ಸರ್ಕಾರವು,** 2019 ನೇ ಸಾಲಿನ ವಾರ್ಷಿಕ ಚಲನಚಿತ್ರ ಪ್ರಶಸ್ತಿಗಳನ್ನು ಘೋಷಿಸಿದೆ. ಒಟ್ಟು 25 ವಿಭಾಗಗಳಲ್ಲಿ ಪ್ರಶಸ್ತಿ ನೀಡಲಾಗಿದ್ದು, ಕಿಚ್ಚ ಸುದೀಪ್ ಅವರಿಗೆ ಪೈಲ್ವಾನ್ ಚಿತ್ರಕ್ಕಾಗಿ ಅತ್ಯುತ್ತಮ ನಟ, ಅನುಪಮಾ ಗೌಡ ಅವರಿಗೆ ತ್ರಯಂಬಕಂ ಚಿತ್ರಕ್ಕಾಗಿ ಅತ್ಯುತ್ತಮ ನಟಿ ಪ್ರಶಸ್ತಿ ಲಭಿಸಿದೆ. ಪಿ. ಶೇಷಾದ್ರಿ ನಿರ್ದೇಶನದ ಹಾಗೂ ಮಿತ್ರಚಿತ್ರ ನಿರ್ಮಾಪಕತ್ವದ –'ಮೋಹನದಾಸ' ಅತ್ಯುತ್ತಮ ಚಿತ್ರ ಎಂದು ಘೋಷಿಸಲಾಗಿದೆ. ಏಳು ವರ್ಷಗಳ ಬಳಿಕ ಚಲನಚಿತ್ರ ಪ್ರಶಸ್ತಿಗೆ ಮರುಚಾಲನೆ ನೀಡಲಾಗಿದ್ದು, ಒಟ್ಟು 25 ವಿಭಾಗಗಳಲ್ಲಿ ಪ್ರಶಸ್ತಿ ನೀಡಲಾಗುತ್ತಿದೆ.

<><><>

**ಚಿಕ್ಕಮಗಳೂರು ಜಿಲ್ಲೆಯ ಭೈರನಮಕ್ಕಿ** ಗ್ರಾಮದ ವಸಂತ್ ಕುಮಾರ್ ಅವರು ಕುವೆಂಪು ವಿಶ್ವವಿದ್ಯಾಲಯದ ಕನ್ನಡ ಭಾರತಿ ವಿಭಾಗದ ಎಂ.ಎ ಪದವಿ ಪರೀಕ್ಷೆಯಲ್ಲಿ ಪ್ರಥಮ ರ್‍ಯಾಂಕ್ ಪಡೆದಿದ್ದಾರೆ. ವಿಶ್ವ ವಿದ್ಯಾಲಯದಲ್ಲಿ ನಡೆದ 34 ನೇ ಘಟಿಕೋತ್ಸವದಲ್ಲಿ, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರಿಂದ ಒಟ್ಟು 10 ಚಿನ್ನದ ಪದಕಗಳೊಂದಿಗೆ ನಗದು ಬಹುಮಾನವನ್ನು, ಸ್ವೀಕರಿಸಿರುವ ವಿದ್ಯಾರ್ಥಿ ವಸಂತ ಕುಮಾರ್ ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ವಿದ್ಯುತ್ಶಕ್ತಿ ವಿಭಾಗದ ಅಭಿಯಾಂತ್ರಿಕರು,** ಲೈನ್ ಮ್ಯಾನ್ ಗಳು ಹಾಗೂ ಜನಪ್ರತಿನಿಧಿಗಳು ನೇರವಾಗಿ ಗ್ರಾಹಕರ ಸಂಪರ್ಕ ಕ್ಕೆ ಬರುವುದರ ಮೂಲಕ ವಿದ್ಯುತ್ ಪೂರೈಕೆ ಸಮಸ್ಯೆಗಳನ್ನು ಶೀಘ್ರದಲ್ಲಿ ಸರಿಪಡಿಸಬಹುದು ಎಂದು ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್ ಹೇಳಿದರು. ಇಂಧನ ಇಲಾಖೆಯ ವಿವಿಧ ವಿ 'ಯಗಳ ಕುರಿತು ವಿಜಯಪುರದಲ್ಲಿ ಆಯೋಜಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸಭೆಯಲ್ಲಿ ಸಕ್ಕರೆ ಹಾಗೂ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಪಾಟೀಲ, ಇಂಡಿ ಶಾಸಕ ಯಶವಂತರಾಯ ಗೌಡ ಪಾಟೀಲ್ ಸೇರಿದಂತೆ ಅಧಿಕಾರಿಗಳು ಇದ್ದರು.

<><><>

**ನಾಡಿನ ಅಭ್ಯುದಯಕ್ಕೆ,** ಸಂಸ್ಕೃತಿ ಮತ್ತು ಸಾಹಿತ್ಯ ಕ್ಷೇತ್ರದ ಬೆಳವಣಿಗೆ ಅತ್ಯಗತ್ಯವಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು. ಕೊಪ್ಪಳ ನಗರದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ, ವತಿಯಿಂದ ಆಯೋಜಿಸಲಾದ 2022 ನೇ ಸಾಲಿನ ಗೌರವ ಪ್ರಶಸ್ತಿ, ಸಾಹಿತ್ಯಶ್ರೀ ಪ್ರಶಸ್ತಿ ಹಾಗೂ 2021 ನೇ ಸಾಲಿನ ಪುಸ್ತಕ ಬಹುಮಾನ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ವಿಧಾನ ಪರಿ 'ತ್ ಸದಸ್ಯೆ ಹೇಮಲತಾ ನಾಯಕ ಅವರು, ಸಾಹಿತ್ಯ ಲೋಕಕ್ಕೆ ವಿಶೇಷ ಕೊಡುಗೆ ನೀಡಿರುವ ಕೊಪ್ಪಳದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಕಾರ್ಯಕ್ರಮ ನಡೆಯುತ್ತಿರುವುದು ಸಂತಸ ತಂದಿದೆ. ಈ ಭಾಗದಲ್ಲಿ ಹಲವಾರು ಸಾಹಿತಿಗಳು, ಲೇಖಕರಿದ್ದಾರೆ. ಕನ್ನಡವನ್ನು ಉಳಿಸುವ ಮತ್ತು ಬೆಳೆಸುವಂತಹ ಕೆಲಸಗಳು ನಿರಂತರವಾಗಿ ನಡೆಯಬೇಕು ಎಂದರು.

<><><>

**ಪರೀಕ್ಷೆಗಳು ವಿದ್ಯಾರ್ಥಿ ಜೀವನದ** ವಿಜಯದ ಮೆಟ್ಟಿಲುಗಳು. ವಿದ್ಯಾರ್ಥಿ ಜೀವನದ ಗೆಲುವಿಗೆ ಸತತ ಪರಿಶ್ರಮ, ಶ್ರದ್ಧೆ, ಛಲ ಅತಿ ಮುಖ್ಯ ಎಂದು ಧಾರವಾಡ, ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಹೇಳಿದರು. ಕೊಣ್ಣೂರಿನ ಕೆ.ಇ.ಎಸ್. ಪ್ರೌಢ ಶಾಲೆಯಲ್ಲಿ, ವಿದ್ಯಾವರ್ಧಕ ಸಂಘದ 'ಮಕ್ಕಳ ಮಂಟಪ'ವು ಕನಕದಾಸ ಬಾಲಕಿಯರ ಪ್ರೌಢ ಶಾಲೆಯ ಸಹಯೋಗದಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ "ಅಧ್ಯಯನದಲ್ಲಿ ಏಕಾಗ್ರತೆ ಸಾಧಿಸುವುದು ಹೇಗೆ" ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

**ಗಣರಾಜ್ಯೋತ್ಸವ ದಿನಾಚರಣೆಯಂದು** ಬೀದರ್ ಜಿಲ್ಲೆಯಲ್ಲಿ ಭಾರತೀಯ ಸಂವಿಧಾನ ಅಂಗೀಕಾರದ ಸ್ಮರಣಾರ್ಥವಾಗಿ, ಬೆಳಗ್ಗೆ 9 ಗಂಟೆಗೆ ತಿರಂಗಾ ರ್‍ಯಾಲಿಯನ್ನು ಆಯೋಜಿಸಲಾಗುತ್ತಿದೆ ಎಂದು ಕರ್ನಾಟಕ ಏರ್ ಎನ್.ಸಿ.ಸಿ ಬೀದರ್ ಕಮಾಂಡಿಂಗ್ ಆಫೀಸರ್ ಗ್ರೂಪ್ ಕ್ಯಾಪ್ಟನ್ ವಿ.ಎನ್.ಎಲ್ ರೆಡ್ಡಿ ವರು ತಿಳಿಸಿದ್ದಾರೆ. ತಿರಂಗಾ ರ್‍ಯಾಲಿಯಲ್ಲಿ 120 ಕೆಡೆಟ್ ಗಳು ಭಾಗವಹಿಸಲಿದ್ದು, 60 ಅಡಿ ಉದ್ದದ ತ್ರಿವರ್ಣ ಧ್ವಜವನ್ನು ಹಿಡಿದು ಎರಡೂವರೆ ಕಿಲೋಮೀಟರ್ ಸಾಗಲಿದ್ದಾರೆ ಎಂದು ಅವರು ತಿಳಿಸಿದರು.

<><><>

**ಜನೆವರಿ 24 ರಿಂದ 26 ರ ತನಕ,** ಮೂರು ದಿನಗಳ ಶಿಶಿರೋತ್ಸವ–2025 ನ್ನು, ಕಲಬುರುಗಿಯ ಶರಣಬಸವೇಶ್ವರ ಕೆರೆ ಸಮೀಪದ ಉದ್ಯಾನವನದಲ್ಲಿ ಆಯೋಜಿಸಲಾಗುತ್ತಿದೆ ಎಂದು ಕೆರೆ ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಹಾಗೂ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ ಹೇಳಿದರು. ಶಿಶಿರೋತ್ಸವ ಕಾರ್ಯಕ್ರಮದ ಅಂಗವಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಅವರು ತಿಳಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>